ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.ರವರ ನ್ಯಾಯಾಲಯ,
ಶ್ರೀರಂಗಪಟ್ಟಣ.

ಕ್ರಿಮಿನಲ್ ಮೊಕದ್ದಮೆ ಸಂಖ್ಯೆ **: 30/2022**

ಚಾ.ಸಾ. **:- 11**
ಪ್ರಾ.ಸಾ. **:- 02**

| | | |
|---|---|---|
| ಹೆಸರು | : | ಟಿ.ಎಂ.ಪುನೀತ್ |
| ತಂದೆಯ ಹೆಸರು | : | ಜಿ.ಮಂಜುನಾಥ್ |
| ವಯಸ್ಸು | : | 43 ವರ್ಷ |
| ಉದ್ಯೋಗ | : | ಪಿ.ಐ., ಬಿಳಿಕೆರೆ ಪೊಲೀಸ್ ಠಾಣೆ |
| ವಾಸಸ್ಥಳ | : | ಮೈಸೂರು. |

---

ಪ್ರಮಾಣೀಕರಿಸಲಾದ ದಿನಾಂಕಃ- **09.06.2026.**

<u>ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :</u>

ನಾನು ದಿನಾಂಕಃ 01.04.2021 ರಿಂದ 23.07.2022 ರ ಅವಧಿಯಲ್ಲಿ ಶ್ರೀರಂಗಪಟ್ಟಣ ಟೌನ್ ಪೊಲೀಸ್ ಠಾಣೆಯಲ್ಲಿ ಪಿ.ಐ.ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕಃ 12.12.2021 ರಂದು ನಾನು ಚಾ.ಸಾ-10 ರವರಿಂದ ಕಡತವನ್ನು ಸ್ವೀಕರಿಸಿ ತನಿಖೆ ಮುಂದುವರೆಯಿಸಿರುತ್ತೇನೆ.

ನಂತರ ಗಾಯಾಳು ಮೃತಪಟ್ಟಿದ್ದು, ಆ ಬಗ್ಗೆ ಸಿಬ್ಬಂದಿಯು ಆಸ್ಪತ್ರೆಯಿಂದ ಡೆತ್ ಮೆಮೋವನ್ನು ತಂದು ಹಾಜರುಪಡಿಸಿದ್ದು, ಅದನ್ನು ಸ್ವೀಕರಿಸಿ ಕಲಂ.304(ಎ) ಅಳವಡಿಸಿಕೊಂಡಿರುತ್ತೇನೆ. ಅಪರಿಚಿತ ಮೃತರ ಗುರುತು ಪತ್ತೆ ಹಚ್ಚಲು ಕ್ರಮ ಕೈಗೊಂಡಿರುತ್ತೇನೆ.

ಚಾ.ಸಾ-10 ರವರ ಮೂಲಕ ನಿಪಿ**-4** ರಂತೆ ಪಂಚರ ಸಮಕ್ಷಮ ಮೃತರ ಶವಪಂಚನಾಮೆಯನ್ನು ಜರುಗಿಸಿರುತ್ತೇನೆ. ನಂತರ ಮೃತರ ಅಂತ್ಯಕ್ರಿಯೆ ಮಾಡಿರುತ್ತೇವೆ.

ನಂತರ ಅಪಘಾತಪಡಿಸಿದ ವಾಹನದ ಮಾಲೀಕರಿಗೆ ಐ.ಎಂ.ವಿ.ಕಾಯ್ದೆಯಡಿ ನೋಟೀಸ್ ನೀಡಿ ಉತ್ತರ ಪಡೆದಿರುತ್ತೇನೆ. ಸದರಿ ನೋಟೀಸ್ ಮತ್ತು ಉತ್ತರವನ್ನು ಈಗ ನೋಡುತ್ತಿದ್ದು, ಅವುಗಳನ್ನು ನಿಪಿ**-7** ಮತ್ತು **8** ಎಂದು ಗುರುತಿಸಲಾಯಿತು. ಆರ್.ಟಿ.ಓ.ಅಧಿಕಾರಿಗಳು ವಾಹನವನ್ನು ಪರಿಶೀಲಿಸಿದ ನಂತರ ವಾಹನವನ್ನು ಬಾಂಡ್ ಪಡೆದು ಬಿಡುಗಡೆ ಮಾಡಿರುತ್ತೇನೆ.

ಅಪಘಾತಕ್ಕೆ ಸಂಬಂಧಿಸಿದಂತೆ ವಾಹನವನ್ನು ಪರಿಶೀಲನೆ ಮಾಡಿ ಐ.ಎಂ.ವಿ.ವರದಿ ಸಲ್ಲಿಸುವಂತೆ ಆರ್.ಟಿ.ಓ.ರವರಿಗೆ ಮನವಿ ಸಲ್ಲಿಸಿ, ನಂತರದಲ್ಲಿ ವರದಿಯನ್ನು ಪಡೆದುಕೊಂಡಿರುತ್ತೇನೆ. ಸದರಿ ಐ.ಎಂ.ವಿ.ವರದಿಯನ್ನು ಈಗ ನೋಡುತ್ತಿದ್ದು, ಅದನ್ನು ಈಗ ನಿಪಿ**-9** ಎಂದು ಗುರುತಿಸಲಾಯಿತು.

ಮೃತರ ಪಿ.ಎಂ.ವರದಿಯನ್ನು ಸ್ವೀಕರಿಸಿ ಕಡತಕ್ಕೆ ಲಗತ್ತಿಸಿಕೊಂಡಿರುತ್ತೇನೆ. ಸದರಿ ವರದಿಯನ್ನು ಈಗ ನೋಡುತ್ತಿದ್ದು, ಅದನ್ನು ನಿಪಿ**-10** ಎಂದು ಗುರುತಿಸಲಾಯಿತು.

ಆರೋಪಿ ಠಾಣೆಗೆ ಹಾಜರಾಗಿದ್ದು, ಅವರಿಗೆ ನೋಟೀಸ್ ಜಾರಿ ಮಾಡಿ ಬಾಂಡ್ ಪಡೆದು ಜಾಮೀನಿನ ಮೇಲೆ ಅವರನ್ನು ಬಿಡುಗಡೆ ಮಾಡಿರುತ್ತೇನೆ.

ನಂತರ ಪ್ರಕರಣದ ತನಿಖೆ ಪೂರ್ಣಗೊಂಡಿದ್ದರಿಂದ ನ್ಯಾಯಾಲಯಕ್ಕೆ ಅಂತಿಮ ವರದಿ ಸಲ್ಲಿಸಿರುತ್ತೇನೆ.

ಆರೋಪಿಯನ್ನು ಸಾಕ್ಷಿಯು ನೋಡಿ ಗುರುತಿಸಿರುತ್ತಾರೆ.

<u>ಪಾಟೀ ಸವಾಲು **:** ಆರೋಪಿ ಪರ ವಕೀಲರಿಂದ **:**</u>

ತನಿಖಾ ಸಮಯದಲ್ಲಿ ಆರೋಪಿಯ ತಪ್ಪು ಇರುವುದಿಲ್ಲವೆಂದು ಕಂಡು ಬಂದಿರುತ್ತದೆ ಎಂದರೆ ಸರಿಯಲ್ಲ. ಮೃತರ ತಪ್ಪಿನಿಂದಲೇ ಅಪಘಾತವಾಗಿರುತ್ತದೆ ಎಂದರೆ ಸರಿಯಲ್ಲ. ಆರೋಪಿ ಯಾವುದೇ ತಪ್ಪು ಮಾಡದಿದ್ದರೂ ದೂರುದಾರರ ಕುಟುಂಬಕ್ಕೆ ವಿಮೆ ಪರಿಹಾರ

ಕೊಡಿಸುವ ಸಲುವಾಗಿ ಸುಳ್ಳು ದಾಖಲಾತಿ ಸೃಷ್ಟಿಸಿ, ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ **:-** ಇಲ್ಲ**.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

ಪ್ರಧಾನ ಹಿರಿಯ ಸಿಜೆ ಮತ್ತು
ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.

**ಸಾಕ್ಷಿದಾರರ ಸಹಿ.**